All India Radio: Bangalore
National Bulletin In Kannada
25.02.2026 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><*><><<>

ಮುಖ್ಯಾಂಶಗಳು

೧. ಇತರೆ ಕ್ಷೇತ್ರಗಳಂತೆ ಆರೋಗ್ಯ ವಲಯದಲ್ಲಿ ತಂತ್ರಜ್ಞಾನ ಮತ್ತು ಎಐ ನಿರ್ಣಾಯಕ ಪಾತ್ರ- ರಾಷ್ಟ್ರಪತಿ ದ್ರೌಪದಿ ಮುರ್ಮು

೨. ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಎರಡು ದಿನ ಇಸ್ರೇಲ್ ಪ್ರವಾಸ; ಬೆಂಜಮಿನ್ ನೇತನ್ಯಾಹು ಜೊತೆ ದ್ವಿಪಕ್ಷೀಯ ಮಾತುಕತೆ

೩. ಮಾಚ್ ೩೧ರೊಳಗೆ ಲಭ್ಯವಿರುವ ಅನುದಾನ ಸಮರ್ಪಕ ಬಳಕೆಗೆ ರಾಜ್ಯಗಳಿಗೆ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಕರೆ

೪. ಭಯೋತ್ಪಾದನೆ ನಿಗ್ರಹ ಕುರಿತಂತೆ ಭಾರತ-ಇಸ್ರೇಲ್ ನಡುವಿನ ಜಂಟಿ ಕಾರ್ಯಕಾರಿ ಸಭೆ ದೆಹಲಿಯಲ್ಲಿ ಆರಂಭ

೫. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಸೂಪರ್ ೮ ರ ಪಂದ್ಯದಲ್ಲಿ ಪಾಕಿಸ್ತಾನವನ್ನು ಮಣಿಸಿದ ಇಂಗ್ಲೆಂಡ್

<><><*><><<>

ಎರಡು ದಿನಗಳ ಮಹಾರಾಷ್ಟ್ರ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಬುಲ್ಢಾನಾ ಜಿಲ್ಲೆಯ ಶೇಗಾಂವ್‌ನಲ್ಲಿ ಕೇಂದ್ರ ಆಯುಷ್ ಸಚಿವಾಲಯ ಆಯೋಜಿಸಿರುವ 'ರಾಷ್ಟ್ರೀಯ ಆರೋಗ್ಯ ಮೇಳ ೨೦೨೬' ಅನ್ನು ಉದ್ಘಾಟಿಸಲಿದ್ದಾರೆ. ಅವರು ನಾಗ್ಪುರದಲ್ಲಿ ಬ್ರಹ್ಮಕುಮಾರಿ ಸಂಸ್ಥೆ ಆಯೋಜಿಸಿರುವ 'ಏಕತೆ ಮತ್ತು ವಿಶ್ವಾಸದ ಮೂಲಕ ಮಹಾರಾಷ್ಟ್ರದ ಸುವರ್ಣ ಯುಗ'ದ ರಾಜ್ಯಮಟ್ಟದ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಅವರು ಮುಂಬೈನಲ್ಲಿ ನಿನ್ನೆ ಪಿಡಿ ಹಿಂದೂಜಾ ಆಸ್ಪತ್ರೆಯ 'ಜೀವಗಳನ್ನು ಉಳಿಸುವುದು ಮತ್ತು ಆರೋಗ್ಯಕರ ಭಾರತವನ್ನು ನಿರ್ಮಿಸುವುದು' ಎಂಬ ರಾಷ್ಟ್ರವ್ಯಾಪಿ ಅಭಿಯಾನ ಉದ್ಘಾಟಿಸಿ, ನಾಗರಿಕರ ಆರೋಗ್ಯವು ಸಾಮೂಹಿಕ ಜವಾಬ್ದಾರಿಯಾಗಿದೆ ಮತ್ತು ಬಡವರಲ್ಲಿ ಕಡು ಬಡವರಿಗೂ ಸಹ ಸಕಾಲಿಕ ಮತ್ತು ಸೂಕ್ತ ವೈದ್ಯಕೀಯ ಆರೈಕೆ ಸಿಗುವಂತೆ ನೋಡಿಕೊಳ್ಳಲು ಎಲ್ಲಾ ಪಾಲುದಾರರು ಒಗ್ಗೂಡಿ ಕಾರ್ಯನಿರ್ವಹಿಸಬೇಕು ಎಂದರು. ಎಲ್ಲಾ ನಾಗರಿಕರ ಆರೋಗ್ಯ ರಕ್ಷಣೆಗೆ ಮತ್ತು ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ಸರ್ಕಾರ ಕಳೆದ ದಶಕದಲ್ಲಿ ಹಲವಾರು ಪ್ರಮುಖ ಕ್ರಮಗಳನ್ನು ತೆಗೆದುಕೊಂಡಿದೆ.

ಧ್ವನಿ: ರಾಷ್ಟ್ರಪತಿ ( ೨೧ ಸೆಕೆಂಡ್‌ಗಳು)

ತಂತ್ರಜ್ಞಾನ ಮತ್ತು ಎಐ, ಇತರ ಕ್ಷೇತ್ರಗಳಂತೆ ಆರೋಗ್ಯ ಸೇವೆಯಲ್ಲಿಯೂ ನಿರ್ಣಾಯಕ ಪಾತ್ರ ವಹಿಸುತ್ತಿವೆ ಎಂದು ರಾಷ್ಟ್ರಪತಿಗಳು ಹೇಳಿದರು.

<>><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಸ್ರೇಲ್ ಪ್ರಧಾನಮಂತ್ರಿ ಬೆಂಜಮಿನ್ ನೆತನ್ಯಾಹು ಅವರ ಆಹ್ವಾನದ ಮೇರೆಗೆ ಇಂದಿನಿಂದ ಎರಡು ದಿನ ಇಸ್ರೇಲ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಇದು ಇಸ್ರೇಲ್‌ಗೆ ಪ್ರಧಾನಮಂತ್ರಿ ಅವರ ಎರಡನೇ ಭೇಟಿಯಾಗಲಿದೆ. ಪ್ರಧಾನಿ ಅವರು ಇಸ್ರೇಲ್ ಪ್ರಧಾನಮಂತ್ರಿ ಬೆಂಜಮಿನ್ ನೆತನ್ಯಾಹು ಅವರನ್ನು ಭೇಟಿ ಮಾಡಲಿದ್ದಾರೆ. ಭಾರತ - ಇಸ್ರೇಲ್ ಕಾರ್ಯತಂತ್ರದ ಪಾಲುದಾರಿಕೆಯಲ್ಲಿ ಆಗಿರುವ ಮಹತ್ವದ ಪ್ರಗತಿಯನ್ನು ಉಭಯ ನಾಯಕರು ಪರಾಮರ್ಶಿಸಲಿದ್ದಾರೆ.ವಿಜ್ಞಾನ ಮತ್ತು ತಂತ್ರಜ್ಞಾನ, ನಾವೀನ್ಯತೆ, ರಕ್ಷಣೆ ಮತ್ತು ಭದ್ರತೆ, ಕೃಷಿ, ನೀರು ನಿರ್ವಹಣೆ, ವ್ಯಾಪಾರ ಮತ್ತು ಆರ್ಥಿಕತೆ ಮತ್ತು ಜನರ ನಡುವಿನ ವಿನಿಮಯ ಸೇರಿ ಸಹಕಾರದ ವಿವಿಧ ಕ್ಷೇತ್ರಗಳಲ್ಲಿ ಹೆಚ್ಚಿನ ಅವಕಾಶಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ. ಉಭಯ ನಾಯಕರು ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ವಿಚಾರ ವಿನಿಮಯ ಮಾಡಿಕೊಳ್ಳುವ ನಿರೀಕ್ಷೆಯಿದೆ. ಅಲ್ಲದೆ, ಪ್ರಧಾನಿ ಇಸ್ರೇಲ್ ಅಧ್ಯಕ್ಷರಾದ ಐಸಾಕ್ ಹೆರ್ಜಾಗ್ ಅವರನ್ನೂ ಭೇಟಿ ಮಾಡಲಿದ್ದಾರೆ. ಪ್ರಧಾನಮಂತ್ರಿ ಅವರ ಈ ಭೇಟಿಯು ಎರಡೂ ದೇಶಗಳ ನಡುವಿನ ಆಳವಾದ ಮತ್ತು ದೀರ್ಘಕಾಲೀನ ಕಾರ್ಯತಂತ್ರದ ಪಾಲುದಾರಿಕೆ ಪುನರುಚ್ಚರಿಸುತ್ತದೆ ಮತ್ತು ಸಾಮಾನ್ಯ ಸವಾಲುಗಳನ್ನು ಪರಿಶೀಲಿಸಲು ಅವಕಾಶ ಒದಗಿಸುತ್ತದೆ.

<>><><*><><<>

ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ದೆಹಲಿಯಲ್ಲಿ ನಿನ್ನೆ ವಿವಿಧ ರಾಜ್ಯಗಳ ಕೃಷಿ ಸಚಿವರು ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಮಹತ್ವದ ವರ್ಚುವಲ್ ಸಭೆ ನಡೆಸಿದರು. ರಾಷ್ಟ್ರೀಯ ಕೃಷಿ ವಿಕಾಸ್ ಯೋಜನೆ -ಆರ್‌ಕೆವಿವೈ ಮತ್ತು ಕೃಷಿ ಉನ್ನತಿ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದರು. ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರವು ಪಿಎಂ - ಆಶಾ ಅಡಿಯಲ್ಲಿ ೨೦೨೫ ರ ಹಿಂಗಾರು ಋತುವಿನಲ್ಲಿ ಸಾಸಿವೆ ಮತ್ತು ಬೇಳೆಕಾಳುಗಳನ್ನು ದೊಡ್ಡ ಪ್ರಮಾಣದಲ್ಲಿ ಖರೀದಿಸುವ ಮೂಲಕ ರೈತರಿಗೆ ಸದೃಢವಾದ ಬೆಲೆ ಬೆಂಬಲವನ್ನು ಒದಗಿಸುತ್ತಿದೆ.ಆದರೆ ರಾಜ್ಯಗಳಿಗೆ ಒದಗಿಸುವ ಪ್ರತಿ ರೂಪಾಯಿ ಹಣವನ್ನು ಸಕಾಲಿಕ, ಪರಿಣಾಮಕಾರಿ ಮತ್ತು ರೈತ ಸ್ನೇಹಿ ರೀತಿಯಲ್ಲಿ ಖರ್ಚು ಮಾಡುವುದು ಅಷ್ಟೇ ಅವಶ್ಯಕವಾಗಿದೆ ಎಂದರು. ಹಣಕಾಸು ವರ್ಷವು ಅಂತ್ಯಗೊಳ್ಳುತ್ತಿರುವುದರಿಂದ ಕೇಂದ್ರ ಸರ್ಕಾರವು ರಾಜ್ಯಗಳಿಗೆ ಬಿಡುಗಡೆ ಮಾಡುವ ಹಣವನ್ನು ಮಾರ್ಚ್ ೩೧ರೊಳಗೆ ರೈತರ ಅನುಕೂಲಕ್ಕಾಗಿ ಸಮಯಕ್ಕೆ ಸರಿಯಾಗಿ, ಸೂಕ್ತವಾಗಿ ಮತ್ತು ಸಾಧ್ಯವಾದಷ್ಟು ಉತ್ತಮ ರೀತಿಯಲ್ಲಿ ಬಳಸಿಕೊಳ್ಳುವುದು ಅತ್ಯಗತ್ಯ. ವಿಳಂಬ ಅಥವಾ ಭಾಗಶಃ ಬಳಕೆ ರೈತ ಆಧಾರಿತ ಯೋಜನೆಗಳ ಉದ್ದೇಶವನ್ನೇ ವಿಫಲಗೊಳಿಸುತ್ತದೆ ಮತ್ತು ತಳಮಟ್ಟದಲ್ಲಿ ಅವುಗಳ ಪರಿಣಾಮವನ್ನು ದುರ್ಬಲಗೊಳಿಸುತ್ತದೆ ಎಂದು ಕೇಂದ್ರ ಸಚಿವರು ಹೇಳಿದರು. ಸಭೆಯಲ್ಲಿ ರಾಜ್ಯವಾರು ಮತ್ತು

ಯೋಜನೆವಾರು ಪ್ರಗತಿಯನ್ನು ವಿವರವಾಗಿ ಪರಿಶೀಲಿಸಲಾಯಿತು. ಕೃಷಿ ಉನ್ನತಿ ಮತ್ತು ರಾಷ್ಟ್ರೀಯ ಕೃಷಿ ವಿಕಾಸ್ ಯೋಜನೆಯಡಿಯಲ್ಲಿ ಒಟ್ಟು ೧೮ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ ಮತ್ತು ಕೇಂದ್ರ ಸರ್ಕಾರವು ಈ ಯೋಜನೆಗಳ ಸ್ಪಷ್ಟ ಪ್ರಯೋಜನಗಳನ್ನು ಪ್ರತಿ ಗ್ರಾಮ ಮತ್ತು ಪ್ರತಿಯೊಂದು ಜಮೀನನ್ನು ತಲುಪಲು ಬಯಸುತ್ತದೆ ಎಂದು ಕೇಂದ್ರ ಸಚಿವರು ಮಾಹಿತಿ ನೀಡಿದರು. ಪ್ರಧಾನ ಮಂತ್ರಿ ಅನ್ನದಾತ ಆಯ್ ಸಂರಕ್ಷಣಾ ಅಭಿಯಾನದ ಮೂಲಕ ರೈತರಿಗೆ ಬೆಲೆ ಬೆಂಬಲವನ್ನು ಒದಗಿಸಲು ಭಾರತ ಸರ್ಕಾರ ದೃಢ ಬದ್ಧತೆ ಹೊಂದಿದೆ ಎಂದು ಪುನರುಚ್ಚರಿಸಿದ ಅವರು  ಮುಂಬರುವ ದಿನಗಳಲ್ಲಿ ಭಾರತ ಸರ್ಕಾರ ರೈತ ಸ್ನೇಹಿ ನಿರ್ಧಾರಗಳನ್ನು ತೆಗೆದುಕೊಳ್ಳುವುದನ್ನು ಮುಂದುವರಿಸುತ್ತದೆ ಮತ್ತು ರಾಜ್ಯಗಳು ಈ ಪ್ರಯತ್ನದಲ್ಲಿ ಸಕ್ರಿಯ ಪಾಲುದಾರರಾಗಿ ಕಾರ್ಯನಿರ್ವಹಿಸಬೇಕೆಂದು ನಿರೀಕ್ಷಿಸುತ್ತದೆ ಎಂದು ಹೇಳಿದರು.

<>><><*><><<>

ಭಯೋತ್ಪಾದನೆ ನಿಗ್ರಹ ಕುರಿತಂತೆ ಭಾರತ-ಇಸ್ರೇಲ್ ನಡುವಿನ ಜಂಟಿ ಕಾರ್ಯಕಾರಿ ಗುಂಪಿನ ಹತ್ತನೇ ಸಭೆ ದೆಹಲಿಯಲ್ಲಿ ನಿನ್ನೆ ಆರಂಭವಾಯಿತು. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಜಂಟಿ ಕಾರ್ಯದರ್ಶಿ ಡಾ.ವಿನೋದ್ ಬಹಾಡೆ, ಇಸ್ರೇಲ್‌ನ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಕಾರ್ಯತಾಂತ್ರಿಕ ವ್ಯವಹಾರಗಳ ವಿಭಾಗದ ಮುಖ್ಯಸ್ಥ ನದಾವ್ ಇಷಾರ್ ಮಾತುಕತೆಯ ನೇತೃತ್ವವನ್ನು ವಹಿಸಿದ್ದರು. ಸಭೆಯಲ್ಲಿ, ಭಯೋತ್ಪಾದನೆ ನಿಗ್ರಹಕ್ಕೆ ದ್ವಿಪಕ್ಷೀಯ ಸಹಕಾರ ಸಂಬಂಧ ವಿಸ್ತರಣೆಯ ಪ್ರಾಮುಖ್ಯತೆಯ ಬಗ್ಗೆ ಹಾಗೂ ಭಾರತ-ಇಸ್ರೇಲ್ ಕಾರ್ಯತಾಂತ್ರಿಕ ಪಾಲುದಾರಿಕೆ ಮತ್ತಷ್ಟು ಬಲವರ್ಧನೆಯ ಬಗ್ಗೆ ಸಮಗ್ರವಾಗಿ ಚರ್ಚಿಸಲಾಯಿತು. ಉಭಯ ದೇಶಗಳು, ಎಲ್ಲ ಬಗೆಯ ಭಯೋತ್ಪಾದಕ ಕೃತ್ಯಗಳನ್ನು ಖಂಡಿಸಿದವು ಮತ್ತು ಗಡಿಯಾಚೆಯಿಂದ ನಡೆಯುವ ಭಯೋತ್ಪಾದನೆ ವಿರುದ್ಧ ಶೂನ್ಯ ಸಹಿಷ್ಣುತೆಯನ್ನು ಪುನರುಚ್ಚರಿಸಿದವು.

<>><><*><><<>

ದತ್ತಾಂಶ ವಿಶ್ಲೇಷಣೆಯನ್ನು ಹೆಚ್ಚಿಸುವ ಪ್ರವೃತ್ತಿಗಳು ಮತ್ತು ವಂಚನೆಯ ಅಪಾಯಗಳನ್ನು ಊಹಿಸುವ ಮತ್ತು ಗ್ರಾಹಕರ ಒಳಗೊಳ್ಳುವಿಕೆಯನ್ನು ಸುಧಾರಿಸುವ ಮೂಲಕ ಬ್ಯಾಂಕಿಂಗ್ ವಲಯದಲ್ಲಿ ಕೃತಕ ಬುದ್ಧಿಮತ್ತೆ ಮಹತ್ವದ ಪಾತ್ರ ವಹಿಸುತ್ತಿದೆ. ಇತ್ತೀಚೆಗೆ ದೆಹಲಿಯಲ್ಲಿ ಮುಕ್ತಾಯಗೊಂಡ ಇಂಡಿಯಾ ಎಐ ಇಂಪ್ಯಾಕ್ಟ್ ಪ್ರದರ್ಶನ ೨೦೨೬ ಎಐ ಭಾರತದ ಬ್ಯಾಂಕಿಂಗ್ ವ್ಯವಸ್ಥೆಯನ್ನು ಹೇಗೆ ವೇಗವಾಗಿ ಪರಿವರ್ತಿಸುತ್ತಿದೆ ಎಂಬುದನ್ನು ಪ್ರದರ್ಶಿಸಿತು, ಆಕಾಶವಾಣಿ ನ್ಯೂಸ್‌ನೊಂದಿಗೆ ಮಾತನಾಡಿದ ಬ್ಲೂ ಮೆಷಿನ್ಸ್ ಎಐ ಮಾರ್ಕೆಟಿಂಗ್ ಮುಖ್ಯಸ್ಥ ಅರ್ಪಣ್ ಖೋಸ್ಲಾ, ಕಂಪನಿಯು ಬ್ಯಾಂಕಿಂಗ್, ಆರೋಗ್ಯ ರಕ್ಷಣೆ ಮತ್ತು ವಿಮಾನಯಾನ ಸೇರಿದಂತೆ ಕೈಗಾರಿಕೆಗಳಲ್ಲಿ ಈಗಾಗಲೇ ನಿಯೋಜಿಸಲಾಗುತ್ತಿರುವ ಎಂಟರ್‌ಪ್ರೈಸ್-ಗ್ರೇಡ್ ವಾಯ್ಸ್ ಎಐ ಆರ್ಕೆಸ್ಟ್ರೇಶನ್ ಪ್ಲಾಟ್‌ಫಾರ್ಮ್‌ಗಳನ್ನು ನಿರ್ಮಿಸುತ್ತಿದೆ ಎಂದು ಹೇಳಿದರು. ಶೃಂಗಸಭೆಯ ಕುರಿತು ಮಾತನಾಡಿದ

ಅವರು, ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯನ್ನು ಭಾರತದ ಎಐ ಪೂರಕ ವ್ಯವಸ್ಥೆಗೆ ಒಂದು ಐತಿಹಾಸಿಕ ಕ್ಷಣ ಎಂದು ಬಣ್ಣಿಸಿದರು.

<>><><*><><<>

ಶ್ರೀಲಂಕಾದ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ೨ನೇ ಗುಂಪಿನ ಸೂಪರ್ ೮ರ ಪಂದ್ಯದಲ್ಲಿ ಇಂಗ್ಲೆಂಡ್ ತಂಡವು, ಪಾಕಿಸ್ತಾನವನ್ನು ೨ ವಿಕೆಟ್‌ಗಳಿಂದ ಸೋಲಿಸಿದೆ. ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್‌ಗಳ ನಷ್ಟಕ್ಕೆ ೧೬೪ ರನ್ ಗಳಿಸಿತು. ಪಾಕಿಸ್ತಾನ ಪರ ಸಾಹಿಬ್‌ಜಾದಾ ಫರ್ಹಾನ್ ೪೫ ಎಸೆತಗಳಲ್ಲಿ ೬೩ ರನ್ ಗಳಿಸಿದರು. ಇಂಗ್ಲೆಂಡ್‌ನ ಲಿಯಾಮ್ ಡಾಸನ್ ೩ ವಿಕೆಟ್ ಪಡೆದರು. ೧೬೫ರನ್‌ಗಳ ಗುರಿ ಬೆನ್ನತ್ತಿದ ಇಂಗ್ಲೆಂಡ್ ೮ ವಿಕೆಟ್‌ಗಳ ನಷ್ಟಕ್ಕೆ ೧೯.೧ ಓವರ್‌ಗಳಲ್ಲಿ ಗುರಿಯನ್ನು ತಲುಪಿತು. ನಾಯಕನ ಹ್ಯಾರಿ ಬ್ರೂಕ್ ೫೧ ಎಸೆತಗಳಲ್ಲಿ ೧೦೦ ರನ್ ಗಳಿಸಿದರು.  ಪಾಕಿಸ್ತಾನ ಪರ ಶಾಹೀನ್ ಅಫ್ರಿದಿ ೩ ವಿಕೆಟ್ ಪಡೆದರು. ಕೊಲೊಂಬೋದ ಆರ್ ಪೇಮದಾಸ ಕ್ರೀಡಾಂಗಣದಲ್ಲಿಂದು ೨ನೇ ಗುಂಪಿನ ಸೂಪರ್ ೮ರ ಪಂದ್ಯದಲ್ಲಿ ಶ್ರೀಲಂಕಾ ತಂಡ, ನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭ ಗಂಟೆಗೆ ಆರಂಭವಾಗಲಿದೆ.

<>><><*><><<>

ಡಿಜಿಲಾಕರ್ ಸಂಬಂಧಿಸಿದ ನಿಯಮಗಳನ್ನು ಸುಧಾರಿಸಲು ಮತ್ತು ಅವುಗಳನ್ನು ಪರಾಮರ್ಶಿಸಲು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಉನ್ನತಮಟ್ಟದ ಸಮಿತಿಯನ್ನು ರಚಿಸಿದೆ. ಈ ಸಮಿತಿ, ಹಾಲಿ ಇರುವ ಡಿಜಿಲಾಕರ್ ನಿಯಮಗಳನ್ನು ಪರಿಶೀಲಿಸಿ, ಅವುಗಳು ಸದ್ಯದ ತಂತ್ರಜ್ಞಾನ ಮತ್ತು ಕಾನೂನು ಪರಿಸರಕ್ಕೆ ಹೊಂದಿಕೊಳ್ಳುತ್ತವೆಯೇ ಎಂಬುದನ್ನು ಪರಾಮರ್ಶಿಸಲಿದೆ. ಅಲ್ಲದೆ ಸಮಿತಿ, ಆರಂಭಿಕ ಹಂತದ ಲಾಕರ್ ಸೇವೆಗಳು ಸೇರಿದಂತೆ ಡಿಜಿಲಾಕರ್ ವ್ಯವಸ್ಥೆಯನ್ನು  ಮತ್ತಷ್ಟು ವಿಸ್ತರಿಸಲು ಭವಿಷ್ಯದ ನೀಲ ನಕ್ಷೆಯನ್ನು ರೂಪಿಸಲಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>